# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೆಂಟನೆಯ ಅಧಿವೇಶನ

**ಕಾರ್ಯಕಲಾಪಗಳ ಪಟ್ಟಿ**

**ಬುಧವಾರ, ದಿನಾಂಕ:28ನೇ ಡಿಸೆಂಬರ್, 2022**

**(ಸಮಯ: ಬೆಳಗ್ಗೆ: 10.30 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎಂಟನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆ:**

7ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಶಶೀಲ್ ಜಿ. ನಮೋಶಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 95 (1000) } ಮಾನ್ಯ ಕಂದಾಯ ಸಚಿವರು

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎಂಟನೆಯ ಪಟ್ಟಿ

## 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

01. ಮಾನ್ಯ ಶಾಸಕರುಗಳಿಗೆ ಈಗಾಗಲೇ ಒದಗಿಸಲಾಗಿರುವ ಮೂರನೇ ಪಟ್ಟಿಯ ರೀತ್ಯಾ.

**ಕಾರ್ಯದರ್ಶಿಯವರು:–**

02. ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತವಾದ ರೂಪದಲ್ಲಿರುವ 2022ನೇ ಸಾಲಿನ "ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರ ವಿಧೇಯಕ"ವನ್ನು ಸಭೆಯ ಮುಂದಿಡುವುದು

## 03. ಅರ್ಜಿಯನ್ನೊಪ್ಪಿಸುವುದು

**ಶ್ರೀ ಚನ್ನರಾಜ್ ಬಸವರಾಜ್ ಹಟ್ಟಿ ಹೊಳಿ** ಅವರು ಚನ್ನರಾಯಪಟ್ಟಣ ತಾಲ್ಲೂಕು, ಶ್ರವಣಬೆಳಗೊಳ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಲ್ಲಿ ಗ್ರಾಮ ಸಭೆ/ವಾರ್ಡ್ ಸಭೆಗಳನ್ನು ನಡೆಸದೆ ಮನೆಗಳ ಹಂಚಿಕೆಯಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು.

## 04. ಶಾಸನ ರಚನೆ

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರ ವಿಧೇಯಕ, 2022

**ಶ್ರೀ ಬಸವರಾಜ ಬೊಮ್ಮಾಯಿ ( ಮಾನ್ಯ ಮುಖ್ಯಮಂತ್ರಿಗಳು) ಅವರು:–**

ಅ) ವಿಧಾನ ಸಭೆಯಿಂದ ತಿದ್ದುಪಡಿಯೊಂದಿಗೆ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ "ಬೆಂಗಳೂರು ಮಹಾನಗರ ಭೂಸಾರಿಗೆ ಪ್ರಾಧಿಕಾರ ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 05. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಕೆ. ಹರೀಶ್ ಕುಮಾರ್** ಅವರು ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನ ಉಪ್ಪಿನಂಗಡಿ ಪೇಟೆಯಲ್ಲಿ ತೆರೆದ ಚರಂಡಿಯ ಬದಲಾಗಿ ಭೂಗತ ಚರಂಡಿಯನ್ನು ನಿರ್ಮಿಸಿ ತ್ಯಾಜ್ಯ ಸಂಸ್ಕರಣೆಯನ್ನು ಪರಿಣಾಮಕಾರಿಯಾಗಿ ಅಳವಡಿಸುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

02. **ಶ್ರೀ ಸಿ.ಎನ್. ಮಂಜೇಗೌಡ ಹಾಗೂ ಶ್ರೀ ಸೂರಜ್ ರೇವಣ್ಣ** ಅವರುಗಳು ಮೈಸೂರಿನ ಆಡಳಿತ ತರಬೇತಿ ಸಂಸ್ಥೆಯ ಅತಿಥಿ ಗೃಹದಲ್ಲಿನ ಪಾರಂಪರಿಕ ಪೀಠೋಪಕರಣಗಳು ಸಂಸ್ಥೆಯಲ್ಲಿ ಲಭ್ಯವಿಲ್ಲದಿರುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

03. **ಶ್ರೀ ಎಸ್.ರುದ್ರೇಗೌಡ** ಅವರು ಶಿವಮೊಗ್ಗ ಜಿಲ್ಲೆಯಲ್ಲಿನ ಸರ್ಕಾರಿ ಸ್ವಾಮ್ಯದಲ್ಲಿರುವ ಪ್ರತಿಷ್ಠಿತ "ದಿ ಮೈಸೂರು ಪೇಪರ್ ಮಿಲ್" ಕಾರ್ಖಾನೆ (ಎಂಪಿಎಂ) 2016ರಿಂದ ಸ್ಥಗಿತಗೊಂಡಿರುವುದರಿಂದ ಉದ್ಭವಿಸಿರುವ ಸಮಸ್ಯೆಗಳ ಕುರಿತು ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಗಮನ ಸೆಳೆಯುವುದು.

04. **ಶ್ರೀ ಪುಟ್ಟಣ್ಣ** ಅವರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು ಬೆಂಗಳೂರು ನಗರ ಜಿಲ್ಲೆ ಕೆಂಗೇರಿ ಹೋಬಳಿ ಕೊಮ್ಮಘಟ್ಟ ಗ್ರಾಮದ ಸರ್ವೆ ನಂ.30ರಲ್ಲಿ ಭೂಸ್ವಾಧೀನ ಪಡಿಸಿಕೊಂಡಿರುವ ಜಮೀನಿನ ಮಾಲೀಕರಿಗೆ ಅಭಿವೃದ್ಧಿ ಆಗಿರುವ ನಿವೇಶನವನ್ನು ಮಂಜೂರು ಮಾಡುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

05. **ಶ್ರೀಯುತರುಗಳಾದ ವೈ.ಎಂ. ಸತೀಶ್, ಶಶೀಲ್ ಜಿ. ನಮೋಶಿ, ಆಯನೂರು ಮಂಜುನಾಥ್** ಹಾಗೂ ಇತರರುಗಳು ಚಾರ್‌ಧಾಮ್ ಯಾತ್ರಾರ್ಥಿಗಳಿಗೆ ನೀಡಲಾಗುವ ಆರ್ಥಿಕ ಸಹಾಯಕ್ಕೆ ಸಲ್ಲಿಸಲಾಗುವ ಅರ್ಜಿಯಲ್ಲಿ ನಮೂದಿಸಲಾಗಿರುವ ಮಾನದಂಡಗಳಿಗೆ ತಿದ್ದುಪಡಿ/ಪರಿಷ್ಕರಣಾ ಮಾರ್ಗಸೂಚಿಗಳನ್ನು ಪ್ರಕಟಿಸುವ ಕುರಿತು ಮಾನ್ಯ ಮುಜರಾಯಿ, ಹಜ್ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

06. **ಶ್ರೀ ಕೆ.ಪ್ರತಾಪ್ ಸಿಂಹ ನಾಯಕ್** ಅವರು ರಾಜ್ಯದಲ್ಲಿ ಎಲೆಚುಕ್ಕೆ ರೋಗ ಉಲ್ಬಣವಾಗುತ್ತಿದ್ದು ಹಾಗೂ ಅಕಾಲಿಕ ಮಳೆಯಿಂದಾಗಿ ಅಡಿಕೆ ಬೆಳೆಗಾರರು ತೀವ್ರ ಸಂಕಷ್ಟಕ್ಕೆ ಒಳಗಾಗಿರುವುದರಿಂದ ಅಡಿಕೆ ಉತ್ಪನ್ನಗಳ ಸಂಶೋಧನೆ ಮತ್ತು ಮೌಲ್ಯವರ್ಧನೆಗೆ ಒತ್ತು ನೀಡುವ ಕುರಿತು ಮಾನ್ಯ ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

3..

07. **ಶ್ರೀ ಎಸ್.ರವಿ, ಶ್ರೀ ಮುನಿರಾಜು ಗೌಡ ಪಿ.ಎಂ.** ಹಾಗೂ ಇತರರು ರಾಜ್ಯದಲ್ಲಿ ಕಟ್ಟಡ ಮತ್ತು ಮೂಲಭೂತ ಸೌಕರ್ಯ ನಿರ್ಮಾಣ ಕ್ಷೇತ್ರದಲ್ಲಿ ಕಲ್ಲು ಸಾಮಗ್ರಿಗಳ ಬೇಡಿಕೆಗೆ ಅನುಗುಣವಾಗಿ ಪೂರೈಕೆ ಮಾಡುವಂತಹ ಗಣಿ ಗುತ್ತಿಗೆ ನಿಯಮಗಳನ್ನು ರೂಪಿಸುವ ಕುರಿತು ಮಾನ್ಯ ಗಣಿ ಮತ್ತು ಭೂವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

08. **ಶ್ರೀ ಯು.ಬಿ.ವೆಂಕಟೇಶ್** ಅವರು ಬೆಂಗಳೂರಿನ ಲಾಲ್‌ಬಾಗ್ ಉದ್ಯಾನವನದ ಒಳಭಾಗದಲ್ಲಿ ಖಾಸಗಿ ಸೊಸೈಟಿಗಳಿಗೆ ಸರ್ಕಾರಿ ಭೂಮಿಯನ್ನು ಗುತ್ತಿಗೆ ನೀಡಿರುವುದರಿಂದ ಸರ್ಕಾರಕ್ಕೆ ಕೋಟ್ಯಾಂತರ ರೂಪಾಯಿ ನಷ್ಟ ಉಂಟಾಗಿರುವ ಕುರಿತು ಮಾನ್ಯ ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

೦1. **ಶ್ರೀ ಬಿ.ಕೆ. ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ನಾಯಕರು ಹಾಗೂ ಶ್ರೀ ಪ್ರಕಾಶ್ ಕೆ.ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು** ಅವರುಗಳು ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನ ಕಾಣಿಯೂರಿನಲ್ಲಿ ರಾತ್ರಿ ಮಲಗಿ ನಿದ್ರಿಸುತ್ತಿದ್ದ ಜನರ ಮೇಲೆ ಕೈಬಾಂಬುಗಳನ್ನು ಸಿಡಿಸಿ, ಅವಾಚ್ಯ ಶಬ್ದಗಳಿಂದ ನಿಂದಿಸಿ ಕೊಲೆ ಬೆದರಿಕೆ ಹಾಕಿದ್ದು, ಇದರಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿರುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ಪುಟ್ಟಣ್ಣ, ನಿರಾಣಿ ಹನುಮಂತಪ್ಪ ರುದ್ರಪ್ಪ ಹಾಗೂ ಎಸ್.ವ್ಹಿ ಸಂಕನೂರ** ಅವರುಗಳು 01.04.2006ರ ನಂತರ ನೇಮಕಗೊಂಡಿರುವ ಸರ್ಕಾರಿ ನೌಕರರಿಗೆ ಎನ್.ಪಿ.ಎಸ್. ಯೋಜನೆಯಿಂದ ನಿವೃತ್ತಿ ನಂತರ ಪಿಂಚಣಿ ಸೌಲಭ್ಯವಿಲ್ಲದೆ ಜೀವನ ನಿರ್ವಹಣೆ ಕಷ್ಟಕರವಾಗಿರುವ ಕುರಿತು ಪ್ರಸ್ತಾಪಿಸುವುದು.

೦3. **ಡಾ.ತೇಜಸ್ವಿನಿಗೌಡ** ಅವರು ಜಮ್ಮು ಕಾಶ್ಮೀರದ ನಿರಾಶ್ರಿತ ಪಂಡಿತರಿಗೆ ಕರ್ನಾಟಕ ರಾಜ್ಯದಲ್ಲಿ ಆಶ್ರಯ ನೀಡಿ ರಕ್ಷಿಸುವ ಕುರಿತು ಪ್ರಸ್ತಾಪಿಸುವುದು.

೦4. **ಶ್ರೀ ಎನ್ ರವಿಕುಮಾರ್** ಅವರು ದಾವಣಗೆರೆ ನಗರದ ಕಲ್ಲೇಶ್ವರ ರೈಸ್‌ಮಿಲ್ ಆವರಣದ ಫಾರ್ಮ್ ಹೌಸ್‌ನಲ್ಲಿ ಕಾನೂನು ಬಾಹಿರವಾಗಿ ಕಾಡು ಪ್ರಾಣಿಗಳ ಹಾಗೂ ಅಕ್ರಮವಾಗಿ ಸಂಗ್ರಹಿಸಿ ಇಡಲಾಗಿರುವ ಮೃತ ಪ್ರಾಣಿಗಳ ಮೂಳೆ, ದಂತ, ಕೊಂಬು, ಚರ್ಮ, ಮುಳ್ಳುಗಳು ಪತ್ತೆಯಾಗಿರುವ ಕುರಿತು ಪ್ರಸ್ತಾಪಿಸುವುದು.

೦5. **ಶ್ರೀ ಮಂಜುನಾಥ ಭಂಡಾರಿ** ಅವರು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಇಲಾಖೆಯ ಸ್ಥಳೀಯ ಆಡಳಿತ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳನ್ನು ಸರ್ಕಾರಿ ನೌಕರರೆಂದು ಪರಿಗಣಿಸುವ ಕುರಿತು ಪ್ರಸ್ತಾಪಿಸುವುದು.

## 07. ಅರ್ಧ ಗಂಟೆ ಕಾಲಾವಧಿ ಚರ್ಚೆ

೦1. ಜಾನುವಾರುಗಳಲ್ಲಿ ಕಂಡುಬಂದಿರುವ ಚರ್ಮಗಂಟು ರೋಗ ಕುರಿತು ದಿನಾಂಕ: 21.12.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:38(290+379+376+360+295+300+362+355)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಮಧು ಜಿ.ಮಾದೇಗೌಡ ಹಾಗೂ ಇತರರಿಂದ** ಅರ್ಧ ಗಂಟೆ ಕಾಲಾವಧಿ ಚರ್ಚೆ.

4..

೦೨. ಅನುದಾನಿತ ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳ ಕುರಿತು ದಿನಾಂಕ: 26.12.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:89 (760)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಶಶೀಲ್ ಜಿ. ನಮೋಶಿ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

೦೩. ಹಲಾಲ್ ಪ್ರಮಾಣೀಕೃತ ಆಸ್ಪತ್ರೆಗಳ ಕುರಿತು ದಿನಾಂಕ: 26.12.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:87 (724)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಎನ್. ರವಿಕುಮಾರ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

## 08. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

**ಶ್ರೀಯುತರುಗಳು:–**

| | | |
|---|---|---|
| 01. | ಯು.ಬಿ.ವೆಂಕಟೇಶ್, ಬಿ.ಕೆ.ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ನಾಯಕರು, ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಮತ್ತು ಎಸ್.ರವಿ ಅವರುಗಳು | ನೀರಾವರಿ ಯೋಜನೆಗಳಲ್ಲಿ ಕೃಷ್ಣಾ ಬಚಾವತ್ ತೀರ್ಪಿನನ್ವಯ ಸಂಪೂರ್ಣ ನೀರಿನ ಸದ್ಬಳಕೆ, ಕುಡಿಯುವ ನೀರಿಗಾಗಿ ಮಹದಾಯಿ ಯೋಜನೆಯನ್ನು ಅನುಷ್ಠಾನಗೊಳಿಸುವ ಕುರಿತು. |
| 02. | ಕೆ.ಎ. ತಿಪ್ಪೇಸ್ವಾಮಿ, ಶರವಣ ಟಿ.ಎ., ಸಿ.ಎನ್. ಮಂಜೇಗೌಡ ಮತ್ತು ಸೂರಜ್ ರೇವಣ್ಣ ಅವರುಗಳು | ಬೆಂಗಳೂರು ಮಹಾನಗರ ಪಾಲಿಕೆವತಿಯಿಂದ ಬೆಂಗಳೂರು ವಿಧಾನ ಸಭಾ ಕ್ಷೇತ್ರದ ಮತದಾರರಲ್ಲಿ ಮತದಾನದ ಬಗ್ಗೆ ಜಾಗೃತಿ ಮತ್ತು ಅರಿವು ಮೂಡಿಸಲು ನೇಮಿಸಲಾಗಿದ್ದ "ಚಿಲುಮೆ" ಖಾಸಗಿ ಸಂಸ್ಥೆಯು ಮತದಾರರ ಮಾಹಿತಿಗಳನ್ನು ಕಲೆಹಾಕುವ ಮೂಲಕ ಅಕ್ರಮವೆಸಗಿರುವ ಕುರಿತು. |

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**